ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ರಾಜ್ಯದಲ್ಲಿ ಅಕ್ರಮ ಅಕ್ಕಿ ಮಾರಾಟ ಕುರಿತು

ಶ್ರೀ ಐವನ್ ಡಿ' ಸೋಜಾ(ನಾಮನಿರ್ದೇಶನ ಹೊಂದಿದವರು):-

505 (596) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಅಕ್ರಮ ಅಕ್ಕಿ ಮಾರಾಟದಲ್ಲಿ ದಾಖಲಾಗಿರುವ ಪ್ರಕರಣಗಳು ಎಷ್ಟು; ವಶಪಡಿಸಲಾದ ಪ್ರಕರಣಗಳೆಷ್ಟು; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ಕೇಂದ್ರಗಳಲ್ಲಿ ಅಕ್ಕಿ ವಿತರಣೆ ಮಾಡಲಾಗುತ್ತದೆ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಎಷ್ಟು ಕೇಂದ್ರಗಳಲ್ಲಿ ಅಕ್ರಮ ವಿತರಣೆ ಬಗ್ಗೆ ಸರ್ಕಾರದಿಂದ ಕೇಸು ದಾಖಲು ಮಾಡಲಾಗಿದೆ; (ವಿವರ ನೀಡುವುದು)

(ಈ) ಅಂತರ್ಜಾಲ ತಾಣದಲ್ಲಿ ಆಹಾರವನ್ನು ಪೂರೈಸುವ ಸಂಸ್ಥೆಗಳ ಮೇಲೆ ಸರ್ಕಾರಕ್ಕೆ ಇರುವ ನಿಯಂತ್ರಣವೇನು; ಅಂತರ್ಜಾಲತಾಣದಲ್ಲಿ ಪೂರೈಕೆದಾರರ ಮೇಲೆ ಸರ್ಕಾರ ಆಹಾರದ ಗುಣಮಟ್ಟವನ್ನು ಪರಿಶೀಲಿಸಿದೆಯೇ ? (ವಿವರ ನೀಡುವುದು)